## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ**: ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ರಾಜ್ಯದ ಗ್ರಾಮ ಪಂಚಾಯತಿ ಗ್ರಂಥಾಲಯಗಳ ಮೇಲ್ವಿಚಾರಕರುಗಳ 2022-23ನೇ ಸಾಲಿನ ಜೂನ್-2022 ರಿಂದ ಆಗಸ್ಟ-2022ರ ವರೆಗೆ ಮಾಹೆಗಳ ಗೌರವ ಸಂಭಾವನೆ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ**:

1. ಸರ್ಕಾರದ ಆದೇಶ ಸಂಖ್ಯೆ: ಇಡಿ 64 ಎಲ್ಐಬಿ 2015, ದಿ: 26-02-2019.
2. ಸರ್ಕಾರದ ಆದೇಶ ಸಂಖ್ಯೆ: ಇಡಿ64 ಎಲ್ಐಬಿ 2015, ದಿ: 24-07-2019.
3. ಸರ್ಕಾರದ ಆದೇಶ ಸಂಖ್ಯೆ:ಎಫ್ ಡಿ/01/ಟಿಎಫ್‌ಪಿ/2022, ದಿನಾಂಕ: 04.04.2022.
4. ಸರ್ಕಾರದಆದೇಶ:ಗ್ರಾಅಪ/03/ಎಎಫ್ಎನ್/2022,ದಿನಾಂಕ: 06.04.2022
5. ಸರ್ಕಾರದ ಆದೇಶ ಸಂಖ್ಯೆ:ಕೆಪಿಆರ್‌ಸಿ-ಕವಿ/4/ 2022, ದಿನಾಂಕ: 23.05.2022
6. ಸರ್ಕಾರದ ಆದೇಶ ಸಂಖ್ಯೆ:ಕಪಂರಾಆ/ಅಭಿವೃದ್ಧಿ/117/2022, ದಿನಾಂಕ: 21.06.2022.
7. ಸರ್ಕಾರದ ಅಧಿಸೂಚನೆ ಸಂಖ್ಯೆ:ನಅಇ 67 ಎಂಎಲ್ಆರ್ 2017, , ದಿನಾಂಕ:13.04.2020.
8. ಸರ್ಕಾರದ ಅಧಿಸೂಚನೆ ಸಂಖ್ಯೆ:ನಅಇ 87 ಎಂಎಲ್ಆರ್ 2015,, ದಿನಾಂಕ:05.11.2020.
9. ಸರ್ಕಾರದ ಅಧಿಸೂಚನೆ ಸಂಖ್ಯೆ:ನಅಇ 92 ಎಂಎಲ್ಆರ್ 2020,, ದಿನಾಂಕ:23.11.2020.
10. ಸರ್ಕಾರದ ಅಧಿಸೂಚನೆ ಸಂಖ್ಯೆ:ನಅಇ 11 ಎಂಎಲ್ಆರ್ 2019, ದಿನಾಂಕ:26.03.2021.
11. ಸರ್ಕಾರದ ಅಧಿಸೂಚನೆ ಸಂಖ್ಯೆ:ನಅಇ 20 ಎಂಎಲ್ಆರ್ 2020, ದಿನಾಂಕ:03.3.2021.
12. ಆಯುಕ್ತಾಲಯದ ಪತ್ರ ಸಂಖ್ಯೆ:ಕಪಂರಾಆ/ಅಭಿವೃದ್ಧಿ/402/2022,, , ದಿನಾಂಕ:16.8.2022.

***

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ(1) ಮತ್ತು (2)ರ ಸರ್ಕಾರದ ಆದೇಶದಲ್ಲಿ ರಾಜ್ಯದಲ್ಲಿನ 5633 ಗ್ರಾಮ ಪಂಚಾಯಿತಿ ಗ್ರಂಥಾಲಯಗಳನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಗ್ರಾಮ ಪಂಚಾಯಿತಿಗಳಿಗೆ ವರ್ಗಾಯಿಸಲಾಗಿರುತ್ತದೆ.

ಓದಲಾದ ಕ್ರಮ ಸಂಖ್ಯೆ(5)ರಲ್ಲಿ ಸರ್ಕಾರದ ದಿನಾಂಕ:23.05.2022ರ ಆದೇಶದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಯೋಜನೆಯಾದ **"ಗ್ರಾಮ ಪಂಚಾಯಿತಿ ಗ್ರಂಥಾಲಯಗಳಿಗೆ ಅನುದಾನ"** ಲೆಕ್ಕ ಶೀರ್ಷಿಕೆ: **2205-00-198-1-02-300ರಡಿ** ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯಕ್ಕೆ ವರ್ಗಾವಣೆ ಮಾಡಲಾಗಿದ್ದು, ಸದರಿ ಲೆಕ್ಕ ಶೀರ್ಷಿಕೆಯ ನಿರ್ವಹಣೆಗೆ ನಿರ್ದೇಶಕರು (ಅಭಿವೃದ್ಧಿ) ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು,ಇವರನ್ನು ಹಣ ಸೆಳೆಯುವ ಅಧಿಕಾರಿಯನ್ನಾಗಿ (ಡಿ.ಡಿ.ಓ) ಹಾಗೂ ಆಯುಕ್ತರು, ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು, ಇವರನ್ನು ಮೇಲುರುಜು ಅಧಿಕಾರಿಯನ್ನಾಗಿ ಮತ್ತು ವೇತನ ಹಾಗೂ ಬಟವಾಡೆ (ಡಿ.ಡಿ.ಓ) ಅಧಿಕಾರಿಯನ್ನಾಗಿ ನೇಮಿಸಿ ಆದೇಶಿಸಲಾಗಿದೆ.

2022-23ನೇ ಸಾಲಿನ ಆಯವ್ಯಯದಲ್ಲಿ **"ಗ್ರಾಮ ಪಂಚಾಯಿತಿಗಳ ಗ್ರಂಥಾಲಯಗಳಿಗೆ ಅನುದಾನ" ಯೋಜನೆಯ ಲೆಕ್ಕ ಶೀರ್ಷಿಕೆ: 2205-00-198-1-02-300**ರಡಿ ಒಟ್ಟು **ರೂ. 80,98,00,000/-ಗಳು**

**ನಿಗಧಿಪಡಿಸಲಾಗಿದೆ (ಎಂಭತ್ತು ಕೋಟಿ ತೊಂಭತ್ತೆಂಟು ಲಕ್ಷ ರೂಪಾಯಿ ಮಾತ್ರ)** ಗಳನ್ನು ನಿಗಧಿಪಡಿಸಿ ಒದಗಿಸಲಾಗಿದೆ. ಮೇಲೆ ಓದಲಾದ ಕ್ರಮ ಸಂಖ್ಯೆ(3)ರ ಸರ್ಕಾರದ ಆರ್ಥಿಕ ಇಲಾಖೆಯ ಪ್ರತ್ಯಾಯೋಜನೆ ಆದೇಶದಂತೆ ಆಯವ್ಯಯದಲ್ಲಿ ಮೊದಲನೇ ಮತ್ತು ಎರಡನೇ ಕಂತಿನ ಅನುದಾನ ಬಿಡುಗಡೆಗೆ ಕಲ್ಪಿಸಲಾಗಿರುತ್ತದೆ.

ಓದಲಾದ ಕ್ರಮ ಸಂಖ್ಯೆ:(7), (8) ಮತ್ತು (9) ರಲ್ಲಿನ ಕರ್ನಾಟಕ ರಾಜ್ಯಪತ್ರದ ಅಧಿಸೂಚನೆಗಳ ಪ್ರಕಾರ (1)ದಕ್ಷಿಣ ಕನ್ನಡ ಜಿಲ್ಲೆಯಲ್ಲಿನ- ಬಜಪೆ, ಮಳವೂರು, ಕಿನ್ನಿಗೋಳಿ, ಮನ್ನಬೆಟ್ಟು ಮತ್ತು (2) ಚಿಕ್ಕಮಗಳೂರು ಜಿಲ್ಲೆಯಲ್ಲಿನ- ಅಜ್ಜಂಪುರ 3) ಶಿವಮೊಗ್ಗ ಜಿಲ್ಲೆಯಲ್ಲಿನ ಹಳೇ ಸೊರಬ ಮತ್ತು 4) ಕಲಬುರಗಿ ಜಿಲ್ಲೆಯಲ್ಲಿನ ಯಡ್ರಾಮಿ ಗ್ರಾಮ ಪಂಚಾಯಿತಿಗಳನ್ನು ಪರಿವರ್ತನೆಗೊಳಿಸಿರುವುದರಿಂದ ಈ 7 ಗ್ರಾಮ ಪಂಚಾಯತಿಗಳನ್ನು ಹೊರತುಪಡಿಸಿ ಇನ್ನುಳಿದ 5575 ಗ್ರಾಮ ಪಂಚಾಯಿತಿಗಳಿಗೆ 2022-23ನೇ ಸಾಲಿನಲ್ಲಿ ಜೂನ್-2022 ರಿಂದ ಆಗಸ್ಟ್-2022ರ ಮಾಹೆಗಳಿಗೆ ಗ್ರಂಥಾಲಯ ಮೇಲ್ವಿಚಾರಕರುಗಳಿಗೆ ಮಾಸಿಕ ಗೌರವಧನ **ತಲಾ ರೂ.12,000/-ಗಳಂತೆ ಒಟ್ಟು ರೂ. 20,07,00,000/- (ಇಪ್ಪತ್ತು ಕೋಟಿ ಏಳು ಲಕ್ಷ್ ರೂಪಾಯಿಗಳು ಮಾತ್ರ)ಗಳು** ಖಜಾನೆ-2 BMS ರ ಮುಖಾಂತರ ಪ್ರಸ್ತುತ ಗ್ರಾಮ ಪಂಚಾಯಿತಿಗಳಲ್ಲಿ ನಿರ್ವಹಿಸಲ್ಪಡುತ್ತಿರುವ "ಗ್ರಾಮ ಪಂಚಾಯಿತಿ ಶಾಸನಬದ್ಧ ಅನುದಾನ" ಬ್ಯಾಂಕ್ ಖಾತೆಗಳಿಗೆ ಬಿಡುಗಡೆಗೊಳಿಸಲು ಸರ್ಕಾರವು ನಿರ್ಧರಿಸಿದೆ. ಅದರಂತೆ ಈ ಆದೇಶ,

**ಸರ್ಕಾರದ ಆದೇಶ ಸಂಖ್ಯೆ: ಕಪಂರಾಅ/ ಅಭಿವೃದ್ಧಿ/117/2022, ಬೆಂಗಳೂರು, ದಿನಾಂಕ: 03.09.2022.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ರಾಜ್ಯದಲ್ಲಿನ ಗ್ರಾಮ ಪಂಚಾಯಿತಿಗಳಲ್ಲಿ ಜೂನ್-2022 ರಿಂದ ಆಗಸ್ಟ್-2022ರ ಮಾಹೆಗಳಿಗೆ (1)ದಕ್ಷಿಣ ಕನ್ನಡ ಜಿಲ್ಲೆಯಲ್ಲಿನ- ಬಜಪೆ, ಮಳವೂರು, ಕಿನ್ನಿಗೋಳಿ, ಮನ್ನಬೆಟ್ಟು ಮತ್ತು (2) ಚಿಕ್ಕಮಗಳೂರು ಜಿಲ್ಲೆಯಲ್ಲಿನ- ಅಜ್ಜಂಪುರ 3) ಶಿವಮೊಗ್ಗ ಜಿಲ್ಲೆಯಲ್ಲಿನ ಹಳೇ ಸೊರಬ ಮತ್ತು 4) ಕಲಬುರಗಿ ಜಿಲ್ಲೆಯಲ್ಲಿನ ಯಡ್ರಾಮಿ ಗ್ರಾಮ ಪಂಚಾಯಿತಿಗಳನ್ನು ಪರಿವರ್ತನೆಗೊಳಿಸಿರುವುದರಿಂದ ಈ 7 ಗ್ರಾಮ ಪಂಚಾಯತಿಗಳನ್ನು ಹೊರತುಪಡಿಸಿ ಇನ್ನುಳಿದ 5575 ಗ್ರಾಮ ಪಂಚಾಯಿತಿಗಳಿಗೆ 2022-23ನೇ ಸಾಲಿನಲ್ಲಿ ಜೂನ್-2022 ರಿಂದ ಆಗಸ್ಟ್-2022ರ ಮಾಹೆಗಳಿಗೆ ಗ್ರಂಥಾಲಯ ಮೇಲ್ವಿಚಾರಕರುಗಳಿಗೆ ಮಾಸಿಕ ಗೌರವಧನ **ತಲಾ ರೂ.12,000/-ಗಳಂತೆ ಒಟ್ಟು ರೂ. 20,07,00,000/- (ಇಪ್ಪತ್ತು ಕೋಟಿ ಏಳು** ಲಕ್ಷ **ರೂಪಾಯಿಗಳು ಮಾತ್ರ)ಗಳು ಅನುದಾನದ ಮೊತ್ತ ಲೆಕ್ಕ ಶೀರ್ಷಿಕೆ: 2205-00-198-1-02-300ರಡಿ ಒಟ್ಟು ಅನುಬಂಧ-1 ರಲ್ಲಿರುವಂತೆ 5575 ಗ್ರಾಮ ಪಂಚಾಯತಿಗಳಿಗೆ** ಖಜಾನೆ-2 BMS' ರ ಮುಖಾಂತರ ಆಯಾ ಗ್ರಾಮ ಪಂಚಾಯಿತಿ ಶಾಸನಬದ್ಧ ಅನುದಾನದ ಬ್ಯಾಂಕ್ ಖಾತೆಗಳಿಗೆ ನೇರವಾಗಿ ಬಿಡುಗಡೆಗೊಳಿಸುವಂತೆ ಆದೇಶಿಸಲಾಗಿದೆ.

**ಮೇಲ್ಕಂಡ ಉದ್ದೇಶಗಳಿಗಲ್ಲದೇ ಈ ಅನುದಾನವನ್ನು ಗ್ರಾಮ ಪಂಚಾಯಿತಿಗಳು ಬೇರೆ ಯಾವುದೇ ಉದ್ದೇಶಕ್ಕೂ ವಿನಿಯೋಗಿಸತಕ್ಕದ್ದಲ್ಲ. ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಒಂದು ವೇಳೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿನ ಗ್ರಂಥಾಲಯಗಳು ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಗೆ ಒಳಪಟ್ಟಿದ್ದಲ್ಲಿ(ಪುರ ಸಭೆ, ಪಟ್ಟಣ ಪಂಚಾಯಿತಿ, ನಗರ ಸಭೆ, ಮಹಾನಗರ ಪಾಲಿಕೆ ವ್ಯಾಪ್ತಿಗೆ) ಸಂಬಂಧಿಸಿದ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಅವುಗಳನ್ನು ಹೊರತುಪಡಿಸಿ ನಿಯಮಾನುಸಾರ ಗೌರವ ಸಂಭಾವನೆಯನ್ನು ಬಿಡುಗಡೆಗೊಳಿಸುವುದು.**

ಈ ಆದೇಶವನ್ನು ಆರ್ಥಿಕ ಇಲಾಖೆಯ ಸರ್ಕಾರದ ಆದೇಶ ಸಂಖ್ಯೆ:ಎಫ್‌ಡಿ/ ಟಿಎಫ್‌ಪಿ/ 2022, ದಿನಾಂಕ:04.04.2022ರ ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

3/9/22

(ಕೆ.ಬಿ. ಅಂಜಿನಪ್ಪ)
ನಿರ್ದೇಶಕರು (ಪಂ.ರಾಜ್-1) ಮತ್ತು
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

3/9/22

**ಇವರಿಗೆ:**

1. ಮಹಾಲೇಖಪಾಲರು ಕರ್ನಾಟಕ,ಬೆಂಗಳೂರು.

2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
4. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
5. ಉಪ ನಿರ್ದೇಶಕರು, ಟಿ.ಎನ್.ಎಂ.ಸಿ., ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
6. ಮುಖ್ಯ ವ್ಯವಸ್ಥಾಪಕರು, ಭಾರತೀಯ ಸ್ಟೇಟ್ ಬ್ಯಾಂಕ್ ವಿಧಾನಸೌಧ ಶಾಖೆ, ಬೆಂಗಳೂರು.
7. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಗಳು.
8. ಕಾರ್ಯನಿರ್ವಾಹಕ ಅಧಿಕಾರಿಗಳು, ರಾಜ್ಯ ಎಲ್ಲಾ ತಾಲ್ಲೂಕು ಪಂಚಾಯಿತಿಗಳು (ಆಯಾ ತಾಲ್ಲೂಕು ವ್ಯಾಪ್ತಿಯ ಗ್ರಾಮ ಪಂಚಾಯಿತಿಗಳಿಗೆ ಈ ಆದೇಶದ ಪ್ರತಿಯನ್ನು ತಲುಪಿಸುವ ವ್ಯವಸ್ಥೆ ಮಾಡುವಂತೆ ಸೂಚಿಸಲಾಗಿದೆ).
9. ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, ವಿಶ್ವೇಶ್ವರಯ್ಯ ಗೋಪುರ, ಬೆಂಗಳೂರು.
10. ಸಂಪಾದಕರು, ಕರ್ನಾಟಕ ವಿಕಾಸ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
11. ಮಾಹಿತಿ ಕೇಂದ್ರ/ವೆಬ್‌ಸೈಟ್, ಗ್ರಾಅಪ ಇಲಾಖೆ.

**ಪ್ರತಿ:**

1. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ-6, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
2. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ. ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ನಿರ್ದೇಶಕರು, ಯೋಜನಾ ಉಸ್ತುವಾರಿ ಮತ್ತು ಮಾಹಿತಿ ವಿಭಾಗ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು
4. ಹೆಚ್ಚುವರಿ ಪ್ರತಿ/ಶಾಖಾ ರಕ್ಷಾ ಕಡತಕ್ಕೆ.